# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2693

ಸದಸ್ಯರ ಹೆಸರು : ಶ್ರೀ. ಸುನೀಲ್ ವಲ್ಯಾಪುರ (ವಿಧಾನಸಭೆಯಿಂದ ಚಿನಾಯಿತರಾದವರು)

ಉತ್ತರಿಸುವ ಸಚಿವರು : ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಸಾಂಖ್ಯಿಕ ಸಚಿವರು

**ಉತ್ತರಿಸುವ ದಿನಾಂಕ : 25.03.2022**

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಣ್ಣ ಮತ್ತು ಅತೀ ಅಣ್ಣ ರೈತರಿಗೆ ಎಸ್.ಸಿ.ಪಿ/ಟಿ.ಎಸ್.ಪಿ ಯೋಜನೆಯಡಿಯಲ್ಲಿ ಪಾಲಿಹೌಸ್, ಗ್ರೀನ್ ಹೌಸ್, ನಿರ್ಮಿಸಲು ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರದಿಂದ 90% ಸಬ್ಸಿಡಿ ನೀಡಲಾಗುತ್ತಿತ್ತು. ಇದ್ದು ಮಾರ್ಪಾಡು ಮಾಡಲು ದಿನಾಂಕ:23.07.2020 ರಂದು ಮಾನ್ಯ ಮಿಷನ್ ನಿರ್ದೇಶಕರು, ತೋಟಗಾರಿಕೆ ಇಲಾಖೆ ರವರು ಸುತ್ತೋಲೆ ಹೊರಡಿಸಿದ್ದು, ಸದರಿ ಸುತ್ತೋಲೆ ಅನ್ವಯ ರಾಜ್ಯ ಸರ್ಕಾರದ 40% ಸಹಾಯಧನ ಕಡಿತಗೊಳಿಸಿ ಕೇಂದ್ರ ಸರ್ಕಾರ ನೀಡುವ ಸಹಾಯಧನ 50% ಮಾತ್ರ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಬಂದಿದ್ದಲ್ಲಿ, ರಾಜ್ಯ ಸರ್ಕಾರದ ಪಾಲಿನ (40%) ಸಹಾಯಧನವನ್ನು ಎಂದಿನಿಂದ ಕೊಡಿಸುವ ವ್ಯವಸ್ಥೆ ಮಾಡಲಾಗುವುದು; (ಮಾಹಿತಿ ನೀಡುವುದು) | ರಾಜ್ಯ ಸರ್ಕಾರದ ಅನುದಾನದ ಲಭ್ಯತೆಯನ್ನು ಆಧರಿಸಿ ರಾಜ್ಯ ಪಾಲಿನ ಶೇಕಡ 90% ರ ಸಹಾಯಧನವನ್ನು ನೀಡುವ ಯೋಜನೆಯನ್ನು ಅನುಷ್ಠಾನಗೊಳಿಸಲಾಗುವುದು. |
| ಇ) | ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನಾಂಗದವರಿಗೆ ಕೇಂದ್ರ ಸರ್ಕಾರ/ ರಾಜ್ಯ ಸರ್ಕಾರದಿಂದ ಬರುವ 90% ಸಹಾಯಧನವನ್ನು ನೀಡುವ ಯೋಜನೆಯನ್ನು ಯಾವಾಗ ಅನುಷ್ಠಾನಗೊಳಿಸಲಾಗುವುದು: (ಮಾಹಿತಿ ನೀಡುವುದು) | |
| ಈ) | ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನಾಂಗದ ಅಭಿವೃದ್ಧಿ ಬಗ್ಗೆ ಸರ್ಕಾರದ ಯೋಜನೆಗಳು ಯಾವುವು; (ವಿವರ ನೀಡುವುದು) | ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನಾಂಗದ ಅಭಿವೃದ್ಧಿಗಾಗಿ ಇಲಾಖೆಯಲ್ಲಿ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ವಿವರ ಈ ಕೆಳಕಂಡತಿದೆ.<br>1. **ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ ಕಾಯ್ದೆ 2013ರಡಿ ಬಳಕೆಯಾಗದೆ ಇರುವ ಮೊತ್ತ ಯೋಜನೆ:** |

| | | |
|---|---|---|
| | | • ಟಿಲ್ಲರ್ ಯಂತ್ರೋಪಕರಣ ಖರೀದಿಗೆ ಶೇ.90 ರಂತೆಸಹಾಯಧನ<br>**2.ಪಿ.ಎಂ.ಕೆ.ಎಸ್.ವೈ- ರಾಷ್ಟ್ರೀಯ ಸುಸ್ಥಿರ ಕೃಷಿ ಅಭಿಯಾನ ಯೋಜನೆ:** ಹನಿನೀರಾವರಿ ಘಟಕ ಅಳವಡಿಕೆಗೆ 2 ಹೆಕ್ಟೇರ್ ವರೆಗೆ ಶೇ.90ರ ಸಹಾಯಧನ<br>**3.ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆ:**<br>• ತೋಟಗಾರಿಕೆ ಬೆಳೆಗಳ ಪ್ರದೇಶ ವಿಸ್ತರಣೆ(40-50%)ಮತ್ತು ನಿರ್ವಹಣೆ<br>• ಪುನಶ್ಚೇತನ(50%)<br>• ನೀರು ಸಂಗ್ರಹಣಾ ಘಟಕ(50%)<br>• ಸಂರಕ್ಷಿತ ಬೇಸಾಯ ಕಾರ್ಯಕ್ರಮ(50%)<br>• ಜೇನು ಸಾಕಾಣಿಕೆ(40%)<br>• ಯಾಂತ್ರೀಕರಣ(40%)<br>• ಸಮಗ್ರ ಪೋಷಕಾಂಶ ಮತ್ತು ಕೀಟ ನಿರ್ವಹಣೆ(30%)<br>• ಕೊಯ್ಲೋತ್ತರ ನಿರ್ವಹಣೆ(35-50%)<br>**4.ತೋಟಗಾರಿಕೆ ಬೆಳೆಗಳ ಕೀಟ ಮತ್ತು ರೋಗಗಳ ಸಮಗ್ರ ನಿಯಂತ್ರಣ ಯೋಜನೆ:**<br>• ಸಸ್ಯ ಸಂರಕ್ಷಣೆ ಔಷಧಿಗಳ ಖರೀದಿಗೆ ಶೇ.90 ರಂತೆ ಗರಿಷ್ಠ ರೂ.9000 ಪ್ರತಿ ಹೆಕ್ಟೇರ್ ಗೆ ಸಹಾಯಧನ<br>**5.ಸಮಗ್ರ ತೋಟಗಾರಿಕೆ ಅಭಿವೃದ್ಧಿ ಯೋಜನೆ:**<br>• ಹೂವು, ಹಣ್ಣು ಹಾಗೂ ತರಕಾರಿ ಬೆಳೆಗಾರರಿಗೆ ಪರಿಹಾರಧನ<br>• ತರಕಾರಿ ಬೀಜದ ಕಿಟ್ ವಿತರಣೆ |

**HORTI / 231/HGM/ 2022**

(ಮುನಿರತ್ನ)
ತೋಟಗಾರಿಕೆ ಹಾಗೂ ಯೋಜನೆ,
ಕಾರ್ಯಕ್ರಮ ಸಂಯೋಜನೆ ಮತ್ತು
, ಸಾಂಖ್ಯಿಕ ಸಚಿವರು